ಲೋಕಧ್ವನಿ

# ಭಾಷಣ ಸ್ಪರ್ಧೆಯಲ್ಲಿ ಪ್ರಥಮ

ಶಿರಸಿ: ಕೆ. ಎಲ್.ಎಸ್. ವಿ. ಡಿ. ಐ. ಟಿ. ಯ ವಿದ್ಯಾರ್ಥಿನಿ ಕುಮಾರಿ.ಸಂಜನಾ ಶಿವಪುರಮಠ್ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿಯು ಏರ್ಪಡಿಸಿದ್ದ ವಿಶ್ವವಿದ್ಯಾಲಯ ಮಟ್ಟದ ಭಾಷಣ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾಳೆ. ರಾಷ್ಟ್ರೀಯ ಶಿಕ್ಷಣ ನೀತಿ 2020 ವಿಷಯದ ಕುರಿತಾಗಿ ಮಾತನಾಡಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾಳೆ. ಮಹಾವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮೂರನೇ ಸೆಮಿಸ್ಟರ ನಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರಿ. ಸಂಜನಾಳ ಈ ಸಾಧನೆಗೆ ಆಡಳಿತ ಮಂಡಳಿ ಅಧ್ಯಕ್ಷ ರಾದ ಶ್ರೀ ವಿನಾಯಕ ಲೊಕುರ್, ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ, ಇ ಆಂಡ್ ಸಿ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್, ಸಾಂಸ್ಕೃತಿಕ ವಿಭಾಗದ ಸಂಚಾಲಕರುಗಳಾದ ಪ್ರೊ. ಸಂಜಯ ಡಂಬಳ, ಪ್ರೊ. ಲಕ್ಷ್ಮಿ ಹಟ್ಟಿ ಹೋಳಿ ಹಾಗೂ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

ಲೋಕಧ್ವನಿ



ಭಾಷಣ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಪಡೆದ ಸಂಜನಾ